**ಅಪರ ಹಿರಿಯ  ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಾಮರಾಜನಗರ.**

**ಸಿ.ಸಿ. ನಂ.901/2023**

**ಚಾಸಾ-01     ಫ್ರಾಸಾ-01**

**ಸಾಕ್ಷಿಗೆ ದಿನಾಂಕಃ 22.11.2025 ರಂದು ಪ್ರಮಾಣ ವಚನ ಭೋಧಿಸಲಾಯಿತು.**

| | |
|---|---|
| ಸಾಕ್ಷಿದಾರರ ಹೆಸರು | : ಸೈಯದ್ ಶಯಿಬ್ ಉಲ್ಲಾ |
| ತಂದೆಯ ಹೆಸರು | : ಲೇಟ್ ಸಯ್ಯದ್ ನೂರ್ |
| ವಯಸ್ಸು | : 55 ವರ್ಷ |
| ಉದ್ಯೋಗ | : ಟೈಲರಿಂಗ್ ಕೆಲಸ |
| ವಾಸ ಸ್ಥಳ | : ಚಾಮರಾಜನಗರ |

**ಮುಖ್ಯ ವಿಚಾರಣೆಃ ಮಾನ್ಯ ಎ.ಪಿ.ಪಿ. ರವರಿಂದಃ**

ನನಗೆ ಚಾಸಾಃ 2 ನನ್ನ ಹೆಂಡತಿ. ಚಾಸಾಃ 3 ನನ್ನ ಮಗಳು. ಚಾಸಾಃ 4 ಮತ್ತು 5 ನನ್ನ ನಾದಿನಿಯರು. ದಿಃ 01.05.2023 ರಂದು ಬೆಳಿಗ್ಗೆ 8.00 ಗಂಟೆ ಸಮಯದಲ್ಲಿ ನಾನು ನಮ್ಮ ಮನೆಯಲ್ಲಿ ಕೆಲಸ ಮಾಡುತ್ತಿದ್ದೆ. ಆ ಸಮಯಕ್ಕೆ 1 ನೇ ಆರೋಪಿಯ ಹೆಂಡತಿ ಅವರ ಮನೆಯ ಕಸವನ್ನು ನಮ್ಮ ಮನೆಯ ಕಡೆ ತಳ್ಳುತ್ತಿದ್ದರು. ಆಗ ಚಾಸಾಃ 2 ರವರು ಏಕೆ ಕಸವನ್ನು ನಮ್ಮ ಮನೆಯ ಕಡೆ ತಳ್ಳುತ್ತೀಯಾ ಎಂದು ಕೇಳಿದರು. ಅದಕ್ಕೆ 1 ನೇ ಆರೋಪಿ ಮತ್ತು ಅವರ ಹೆಂಡತಿ ಚಾಸಾಃ 2 ರವರ ಜೊತೆ ಜಗಳ ಮಾಡುತ್ತಿದ್ದರು. ನಾನು ವಿಚಾರಿಸಲು ಹೋದಾಗ 1 ನೇ ಆರೋಪಿ ನನಗೆ ಅವಾಚ್ಯ ಶಬ್ದಗಳಿಂದ ಬೈದು ನನ್ನನ್ನು ತಳ್ಳಿ ಕೆಳಕ್ಕೆ ಬೀಳಿಸಿ ಎದೆಯ ಮೇಲೆ ಕಾಲಿಟ್ಟು ಹತ್ತಿ ನಿಂತುಕೊಂಡಿದ್ದನು. ದಾರಿಯಲ್ಲಿ ಹೋಗುತ್ತಿದ್ದ ಸಾರ್ವಜನಿಕರು ಜಗಳ ಬಿಡಿಸಿದರು. 1 ನೇ ಆರೋಪಿ ನನಗೆ ಜೀವ ಬೆದರಿಕೆ ಹಾಕಿದನು. ಈ ಬಗ್ಗೆ ನಾನು ದಿಃ

04.05.2023 ರಂದು ಪೊಲೀಸರಿಗೆ ದೂರು ನೀಡಿರುತ್ತೇನೆ. ಸಾಕ್ಷಿ ದೂರಿನಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದರಿಂದ ದೂರನ್ನು ನಿಪಿ 1 ಎಂದೂ, ಸಾಕ್ಷಿಯ ಸಹಿಯನ್ನು ನಿಪಿ 1(ಎ) ಎಂದು ಗುರುತಿಸಲಾಯಿತು. ದೂರು ನೀಡಿದ ಮರುದಿನ ಪೊಲೀಸರು ನಮ್ಮ ಮನೆಯ ಬಳಿ ಬಂದು ಮಧ್ಯಾಹ್ನ 12.00 ಗಂಟೆ ಸಮಯದಲ್ಲಿ ನಾನು ತೋರಿಸಿದ ಸ್ಥಳದಲ್ಲಿ ಚಾಸಾಃ 4 ರವರ ಸಮಕ್ಷಮ ಸ್ಥಳ ಮಹಜರ್ ಜರುಗಿಸಿ ಫೋಟೋ ತೆಗೆದುಕೊಂಡು ನನ್ನ ಸಹಿ ಪಡೆದುಕೊಂಡರು. ಸಾಕ್ಷಿ ಸ್ಥಳ ಮಹಜರ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸ್ಥಳ ಮಹಜರ್ ಅನ್ನು ನಿಪಿ 2 ಎಂದೂ, ಸಾಕ್ಷಿ ಸಹಿಯನ್ನು ನಿಪಿ 2(ಎ) ಎಂದು ಗುರುತಿಸಲಾಯಿತು. ಸಾಕ್ಷಿ ಒಂದು ಫೋಟೋದಲ್ಲಿ ತಾನು ಇರುವುದಾಗಿ ನೋಡಿ ಗುರುತಿಸಿದ್ದರಿಂದ ಸದರಿ ಫೋಟೋವನ್ನು ನಿಪಿ 3 ಎಂದು ಗುರುತಿಸಲಾಯಿತು. ನನ್ನ ಜೊತೆ ಜಗಳ ತೆಗೆದು ಹಲ್ಲೆ ಮಾಡಿದ ವ್ಯಕ್ತಿಗಳನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ನ್ಯಾಯಾಲಯದಲ್ಲಿರುವ 1 ಮತ್ತು 2 ನೇ ಆರೋಪಿಗಳನ್ನು ನೋಡಿ ಗುರುತಿಸಿರುತ್ತಾರೆ.

**ಆರೋಪಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು ಮುಂದೂಡಲಾಯಿತು.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸರಿ ಇದೆ

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಚಾಮರಾಜನಗರ.